**MAY 27, 2026**

**ALL INDIA RADIO- DHARWAD**

**PRADESH SAMACHARA (KANNADA) 7:05 AM**

<><><>

**ಮುಖ್ಯಾಂಶಗಳು**

- **ಶಿಕ್ಷಣವು ಸಂಸ್ಕೃತಿ ಸೇವೆ, ತಾಂತ್ರಿಕ ಅಭಿವೃದ್ಧಿ ಮತ್ತು ರಾಷ್ಟ್ರ ನಿರ್ಮಾಣದ ಹೊಸ ಪ್ರಜ್ಞೆಯ ಆರಂಭ ರಾಜ್ಯಪಾಲ ಥಾವರಚಂದ್ ಗೆಹ್ಲೋಟ್.**

- **ಕೃಷಿ ನಾವೀನ್ಯತೆ ಹಾಗೂ ಕೃಷಿ ಉದ್ಯಮಶೀಲತೆ ಕ್ಷೇತ್ರಗಳಲ್ಲಿ ದೇಶದಲ್ಲೇ ಕರ್ನಾಟಕ ಪ್ರಮುಖ – ಸಚಿವ ಎನ್. ಚಲುವರಾಯಸ್ವಾಮಿ.**

- **ರಾಜ್ಯದಲ್ಲಿ ತೆರವಾಗಲಿರುವ ವಿಧಾನಪರಿ ’ತ್ ಸ್ಥಾನಗಳಿಗೆ ಜೂನ್ 18 ರಂದು ಚುನಾವಣೆ.**

- **ಏರುತ್ತಿರುವ ರಾಜ್ಯ ಸರ್ಕಾರದ ಸಾಲದ ಪ್ರಮಾಣ – ವಿಪಕ್ಷ ನಾಯಕ ಆರ್. ಅಶೋಕ ಆರೋಪ**

- **ಧಾರವಾಡ ಪ್ರತ್ಯೇಕ ನಗರ ಪಾಲಿಕೆಗೆ ರಾಜ್ಯಪಾಲರ ಅಂಕಿತ : ಧಾರವಾಡ ಕರ್ನಾಟಕ ವಿದ್ಯಾವರ್ಧಕ ಸಂಘದ ಸಂತಸ.**

<><><>

**ವಾರ್ತೆಗಳ ವಿವರ...**

<><><>

**ಶಿಕ್ಷಣವು ಸಂಸ್ಕೃತಿ ಸೇವೆ, ತಾಂತ್ರಿಕ ಅಭಿವೃದ್ಧಿ ಮತ್ತು ರಾಷ್ಟ್ರ ನಿರ್ಮಾಣದ ಹೊಸ** ಪ್ರಜ್ಞೆಯ ಆರಂಭ ಸೂಚಿಸುತ್ತದೆ ಎಂದು ರಾಜ್ಯಪಾಲ ಥಾವರಚಂದ್ ಗೆಹ್ಲೋಟ್ ಹೇಳಿದ್ದಾರೆ. **ಬೆಳಗಾವಿ ಜಿಲ್ಲೆಯ ಚಿಕ್ಕೋಡಿ ತಾಲೂಕಿನ** ಶಮನೇವಾಡಿ ಗ್ರಾಮದಲ್ಲಿಂದು, ರಾಷ್ಟ್ರೀಯ ಸಂತ ಆಚಾರ್ಯ 108 ಗುಣಧರನಂದಿ ಮಹಾರಾಜರ ನೇತೃತ್ವದಲ್ಲಿ, ಎ.ಜಿ.ಎಂ.ಇಂಜಿನೀಯರಿಂಗ್ ಕಾಲೇಜು ಉದ್ಘಾಟನೆ ಹಾಗೂ 151 ಅಡಿ ಭಗವಾನ್ ಪಾರ್ಶ್ವನಾಥ ಮೂರ್ತಿಯ ಪ್ರತಿಷ್ಠಾಪನೆಯ, ಭೂಮಿ ಶುದ್ಧೀಕರಣ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು. ರಾಷ್ಟ್ರೀಯ ಸಂತ ಆಚಾರ್ಯ ಗುಣಧರನಂದಿ ಮಹಾರಾಜರು, ಮಾನವೀಯತೆ, ಶಾಂತಿ, ಕರುಣೆ ಮತ್ತು

ಸಾಮಾಜಿಕ ಜಾಗೃತಿಗೆ, ದೈವಿಕ ಸ್ಫೂರ್ತಿಯಾಗಿದ್ದರು. ಅವರ ಇಡೀ ಜೀವನ, ತ್ಯಾಗ, ತಪಸ್ಸು, ಧ್ಯಾನ ಮತ್ತು ಸಾರ್ವಜನಿಕ ಕಲ್ಯಾಣಕ್ಕೆ ಮೀಸಲಾಗಿದೆ. ಸಮಾಜಕ್ಕೆ ಆಧ್ಯಾತ್ಮಿಕ ಸಂದೇಶವನ್ನು ನೀಡುವ ಜೊತೆಗೆ, ಶಿಕ್ಷಣ, ಸೇವೆ ಮತ್ತು ಸಂಸ್ಕೃತಿಯ ಮೂಲಕ, ಬಲಿಷ್ಠ ಭಾರತವನ್ನು ನಿರ್ಮಿಸುವ ಸಂದೇಶ ನೀಡಿದ್ದಾರೆ ಎಂದು ತಿಳಿಸಿದರು.ಆಚಾರ್ಯ ಶ್ರೀಗಳಿಂದ ಪ್ರೇರೇಪಿತರಾಗಿ, ಇಂಜಿನೀಯರಿಂಗ್ ಕಾಲೇಜು ಆರಂಭವಾಗಿದ್ದು, ಸಂಸ್ಥೆಯ ಮೂಲಕ ವಿದ್ಯಾರ್ಥಿಗಳಿಗೆ ಶಿಕ್ಷಣದ ಜೊತೆಗೆ, ಮೌಲ್ಯಗಳು, ತಂತ್ರಜ್ಞಾನದ ಜೊತೆಗೆ ನೀತಿಶಾಸ್ತ್ರ, ವೃತ್ತಿ ಅಭಿವೃದ್ಧಿಯ ಜೊತೆಗೆ, ವ್ಯಕ್ತಿತ್ವ ನಿರ್ಮಾಣ ಒದಗಿಸಲಾಗುತ್ತಿದೆ. ಸಂಸ್ಥೆಯು, ಭವಿಷ್ಯದ ಪೀಳಿಗೆಯ ಕನಸುಗಳನ್ನು ನಿರ್ಮಿಸುವ ಕೇಂದ್ರವಾಗಿ ಪರಿಣಮಿಸುತ್ತಿದೆ ಎಂದು ಹೇಳಿದರು. ಸಮಾಜದಲ್ಲಿ ನೈತಿಕತೆ ಬೆಳೆಸುವ ಶಿಕ್ಷಣ ವ್ಯವಸ್ಥೆ ಅವಶ್ಯವಾಗಿದ್ದು, ಜ್ಞಾನದೊಂದಿಗೆ ಮೌಲ್ಯಗಳ ಸಂಯೋಜನೆ ಅತ್ಯಗತ್ಯವಾಗಿದೆ ಎಂದು ತಿಳಿಸಿದರು.

<><><>

**ಕರ್ನಾಟಕ ಕೃಷಿ ನಾವೀನ್ಯತೆ, ಕೃಷಿ ಉದ್ಯಮಶೀಲತೆ ಹಾಗೂ ಸುಸ್ಥಿರ ಕೃಷಿ** ಕ್ಷೇತ್ರಗಳಲ್ಲಿ ದೇಶದಲ್ಲೇ ಪ್ರಮುಖ ರಾಜ್ಯವಾಗಿ ಗುರುತಿಸಿಕೊಂಡಿದೆ ಎಂದು ಕೃಷಿ ಖಾತೆ ಸಚಿವ ಎನ್. ಚಲುವರಾಯಸ್ವಾಮಿ ಹೇಳಿದ್ದಾರೆ. ಬೆಂಗಳೂರು ಜಿಕೆವಿಜೆ ಆವರಣದಲ್ಲಿ ನಡೆದ 'ಅಗ್ರಿ ಸ್ಟಾರ್ಟ್‌ಅಪ್ ಕಾನ್ಕ್ಲೇವ್' ಕಾರ್ಯಕ್ರಮದಲ್ಲಿ ಭಾಗವಹಿಸಿದ ಅವರು; ಕೃಷಿ ಕ್ಷೇತ್ರದ ನವೀನತೆ, ತಂತ್ರಜ್ಞಾನ ಆಧಾರಿತ ಬೆಳವಣಿಗೆ ಹಾಗೂ ಭವಿ ್ಯದ ಕೃಷಿ ದಿಕ್ಸೂಚಿಗಳ ಕುರಿತು ಮಾತನಾಡಿದರು. ರಾಜ್ಯದಲ್ಲಿರುವ ಪ್ರಮುಖ ಕೃಷಿ ವಿಶ್ವವಿದ್ಯಾನಿಲಯಗಳು, ಸಂಶೋಧನಾ ಸಂಸ್ಥೆಗಳು, ಸ್ಟಾರ್ಟ್‌ಅಪ್‌ಗಳು, ಇಂಕ್ಯೂಬೇಶನ್ ಕೇಂದ್ರಗಳು ಹಾಗೂ ಪ್ರಗತಿಪರ ರೈತರ ಬಲಿ ್ಠ ಜಾಲವು ತಂತ್ರಜ್ಞಾನ ಆಧಾರಿತ ಕೃಷಿ ಪರಿವರ್ತನೆಗೆ ಬಲ ನೀಡುತ್ತಿದೆ ಎಂದು ತಿಳಿಸಿದರು. ಇಂದಿನ ಯುವಕರು ಹಾಗೂ ಕೃಷಿ ಪದವೀಧರರು ಕೇವಲ ಉದ್ಯೋಗ ಹುಡುಕುವವರಾಗಿರದೆ, ಉದ್ಯೋಗ ಸೃಷ್ಟಿಕರ್ತರಾಗಬೇಕು ಎಂಬುದು ಕಾಲದ ಅಗತ್ಯವಾಗಿದೆ ಎಂದು ಸಚಿವರು ಅಭಿಪ್ರಾಯಪಟ್ಟರು.

<><><>

**ರಾಜ್ಯಸಭಾ ಚುನಾವಣೆಯ ದಿನಾಂಕ ಘೋ ಣೆ ಬಳಿಕ ವಿಧಾನಪರಿ ತ್** ಚುನಾವಣೆಗೆ ದಿನಾಂಕ ಪ್ರಕಟಗೊಂಡಿದೆ. ಜೂನ್ 26 ರಂದು ತೆರವಾಗಲಿರುವ ಪರಿ ತ್‌ನ ಏಳು ಸ್ಥಾನಗಳಿಗೆ ಜೂನ್ 18 ರಂದು ಚುನಾವಣೆ ನಡೆಯಲಿದೆ. ಕಾಂಗ್ರೆಸ್‌ನ ಮೂರು, ಬಿಜೆಪಿಯ ಮೂರು, ಜೆಡಿಎಸ್‌ನ ಒಂದು ಸದಸ್ಯರ ಅವಧಿ ಜೂನ್‌ನಲ್ಲಿ ಮುಕ್ತಾಯಗೊಳ್ಳಲಿದೆ. ಜೂನ್ 1 ರಂದು ಅಧಿಸೂಚನೆ ಪ್ರಕಟಗೊಳ್ಳಲಿದ್ದು, ನಾಮಪತ್ರ ಸಲ್ಲಿಕೆಗೆ ಜೂನ್ 8 ಕೊನೆಯ ದಿನವಾಗಿದೆ. ಜೂನ್ 9 ರಂದು ನಾಮಪತ್ರ ಪರಿಶೀಲನೆ ನಡೆಯಲಿದ್ದು, ನಾಮಪತ್ರ ಹಿಂಪಡೆಯಲು ಜೂನ್ 11 ರಂದು ಕೊನೆಯ ದಿನವಾಗಿದೆ. ಮತದಾನ ಜೂನ್ 18 ರಂದು ನಡೆಯಲಿದ್ದು, ಅಂದೇ ಫಲಿತಾಂಶ ಪ್ರಕಟಗೊಳ್ಳಲಿದೆ. ಬಿ.ಕೆ.ಹರಿಪ್ರಸಾದ್, ನಾಸೀರ್ ಅಹಮದ್, ತಿಪ್ಪಣ್ಣ, ಪ್ರತಾಪ್ ಸಿಂಹ ನಾಯಕ್, ಎನ್.ನಾಗರಾಜು, ಸುನೀಲ್ ವಲ್ಯಾಪುರೆ ಮತ್ತು ಗೋವಿಂದರಾಜು ಅವರ ಅಧಿಕಾರವಧಿ ಜೂನ್‌ನಲ್ಲಿ ಮುಕ್ತಾಯಗೊಳ್ಳಲಿದೆ.

<><><>

**ಗದಗ ಜಿಲ್ಲೆಯಲ್ಲಿ 2025-26ನೇ ಸಾಲಿನ ಮುಖ್ಯಮಂತ್ರಿಗಳ ಮೂಲಸೌಕರ್ಯ** ಅಭಿವೃದ್ಧಿ ಕಾರ್ಯಕ್ರಮ ಯೋಜನೆಯಡಿ ಕೈಗೆತ್ತಿಕೊಳ್ಳಲಾಗಿರುವ ಕಾಮಗಾರಿಗಳು ನಾಲ್ಕು ತಿಂಗಳೊಳಗೆ ಪೂರ್ಣಗೊಳ್ಳಲಿದ್ದು, ರಸ್ತೆ ಅಭಿವೃದ್ಧಿ ಕಾರ್ಯಗಳನ್ನು ಗುಣಮಟ್ಟದಿಂದ ಪೂರ್ಣಗೊಳಿಸುವಂತೆ ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಪ್ರವಾಸೋದ್ಯಮ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಎಚ್ ಕೆ ಪಾಟೀಲ ಅಧಿಕಾರಿಗಳಿಗೆ ಹಾಗೂ ಗುತ್ತಿಗೆದಾರರಿಗೆ ಸೂಚಿಸಿದ್ದಾರೆ. ಗದಗ-ಬೆಟಗೇರಿ ನಗರದ ಮೂರು ವಿಭಾಗಗಳಲ್ಲಿ ರಸ್ತೆ ಅಭಿವೃದ್ಧಿ ಕಾಮಗಾರಿಗೆ ಭೂಮಿಪೂಜೆ ನೆರವೇರಿಸಿ ಅವರು ಮಾತನಾಡಿದರು. ಸಾರ್ವಜನಿಕರ ಅನುಕೂಲಕ್ಕಾಗಿ ಕೈಗೆತ್ತಿಕೊಳ್ಳಲಾಗುತ್ತಿರುವ ರಸ್ತೆ ಕಾಮಗಾರಿಗಳು ದೀರ್ಘಕಾಲ ಬಾಳಿಕೆ ಬರುವಂತಾಗಬೇಕು. ಕಾಮಗಾರಿಯ ಪ್ರತಿಯೊಂದು

ಹಂತದಲ್ಲೂ ಲೋಕೋಪಯೋಗಿ ಇಲಾಖೆ ಅಧಿಕಾರಿಗಳು ನಿಗಾ ವಹಿಸಬೇಕು. ಗುಣಮಟ್ಟದಲ್ಲಿ ಯಾವುದೇ ರಾಜಿ ಆಗಬಾರದು," ಎಂದು ಸಚಿವ ಎಚ್ ಕೆ ಪಾಟೀಲ ತಿಳಿಸಿದರು.

<><><>

**ಈಗ ಪ್ರಕಟಣೆ ಬಳಿಕ ಪ್ರದೇಶ ಸಮಾಚಾರ ಮುಂದುವರಿಯುವುದು..**

**ಪ್ರದೇಶ ಸಮಾಚಾರ ಕೇಳುತ್ತಿದ್ದೀರಿ**

<><><>

**ರಾಜ್ಯ ಸರ್ಕಾರದ ಸಾಲದ ಪ್ರಮಾಣ 7 ಲಕ್ಷ ಕೋಟಿ ರೂಪಾಯಿ ದಾಟುತ್ತಿದ್ದು,** ಮುಖ್ಯಮಂತ್ರಿ ಸಿದ್ದರಾಮಯ್ಯ ಅಧಿಕಾರ ತ್ಯಜಿಸುವ ವೇಳೆಗೆ ಅದು 10 ಲಕ್ಷ ಕೋಟಿ ತಲುಪಲಿದೆ ಎಂದು ವಿಪಕ್ಷ ನಾಯಕ ಆರ್.ಅಶೋಕ್ ಆರೋಪಿಸಿದ್ದಾರೆ. ಹಾಸನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, "ಕೆ.ಸಿ. ರೆಡ್ಡಿ ಕಾಲದಿಂದ ಬಸವರಾಜ ಬೊಮ್ಮಾಯಿ ಸರ್ಕಾರದವರೆಗೆ ಒಟ್ಟು ಶೇ.47ರ ್ಟು ಸಾಲ ಮಾಡಲಾಗಿತ್ತು. ಆದರೆ ಕಳೆದ ಮೂರು ವ ್ಗಳಲ್ಲಿ ಕಾಂಗ್ರೆಸ್ ಸರ್ಕಾರವೇ ಶೇ.53ರ ್ಟು ಸಾಲ ಮಾಡಿದೆ" ಎಂದು ಟೀಕಿಸಿದರು. ಬಿಜೆಪಿ ಸರ್ಕಾರ ಆದಾಯದ ಆಧಾರದ ಮೇಲೆ ಬಡವರಿಗೆ ಯೋಜನೆಗಳನ್ನು ಜಾರಿಗೆ ತಂದಿತ್ತು. ಆದರೆ ಕಾಂಗ್ರೆಸ್ ಪಕ್ಷ ಅಧಿಕಾರಕ್ಕಾಗಿ ಗ್ಯಾರಂಟಿ ಯೋಜನೆಗಳನ್ನು ಘೋಷಿಸಿ, ಈಗ ಅವುಗಳನ್ನು ಸಮರ್ಪಕವಾಗಿ ನೀಡಲು ವಿಫಲವಾಗಿದೆ ಎಂದು ದೂರಿದರು. ಸರ್ಕಾರದ ಖಜಾನೆ ಖಾಲಿಯಾಗಿರುವ ಕಾರಣ ಬಿಪಿಎಲ್ ಕಾರ್ಡ್ ರದ್ದುಪಡಿಸಲು ಮುಂದಾಗಿದೆ. ಬಡವರ ಅನ್ನಕ್ಕೂ ಕತ್ತರಿ ಹಾಕಲು ಹೊರಟಿದೆ ಎಂದು ಆರೋಪಿಸಿದರು.

<><><>

**ನಲವತ್ತೂರು ವರ್ಷಗಳ ನಂತರ ಮತ್ತೆ ಧಾರವಾಡಕ್ಕೆ ನಗರ ಪಾಲಿಕೆ ದಕ್ಕಿದ್ದು ಅತ್ಯಂತ** ಹೆಮ್ಮೆಯ ಸಂಗತಿ ಎಂದು ಧಾರವಾಡ ಕರ್ನಾಟಕ ವಿದ್ಯಾವರ್ಧಕ ಸಂಘದ ಕಾರ್ಯಾಧ್ಯಕ್ಷ ಬಸವಪ್ರಭು ಹೊಸಕೇರಿ ಹೇಳಿದ್ದಾರೆ. ರಾಜ್ಯಪಾಲರು ಧಾರವಾಡ ಪ್ರತ್ಯೇಕ ನಗರ ಪಾಲಿಕೆ ಪ್ರಸ್ತಾವನೆಗೆ ಅನುಮೋದನೆ ನೀಡಿರುವ ವಿಷಯ ತಿಳಿದು ಕರ್ನಾಟಕ ವಿದ್ಯಾವರ್ಧಕ ಸಂಘ ತುರ್ತುಕಾರ್ಯಕಾರಿ ಸಮಿತಿ ಸಭೆ ನಡೆಸಿ, ಸರಕಾರಕ್ಕೆ ಮತ್ತು ರಾಜ್ಯಪಾಲರಿಗೆ ಹಾಗೂ ಅವಳಿನಗರದ ಜನಪ್ರತಿನಿಧಿಗಳಿಗೆ ಕೃತಜ್ಞತೆ ಸಲ್ಲಿಸಿತು. ವಿಶೇಷವಾಗಿ ಹನ್ನೊಂದು ದಿನಗಳ ಕಾಲ ಸತ್ಯಾಗ್ರಹ ನಡೆಸಿರುವ ಪ್ರತ್ಯೇಕ ಮಹಾನಗರ ಪಾಲಿಕೆ ಹೋರಾಟ ಸಮಿತಿ ಹಾಗೂ ವಿವಿಧ ಸಂಘಟನೆಗಳು ನಡೆಸಿದ ಹೋರಾಟ ಮತ್ತು ಪ್ರಯತ್ನ ಅಭಿನಂದನೀಯವಾದದ್ದು. ಧಾರವಾಡದ ಜನತೆಯ ಬೇಡಿಕೆಗೆ ಮನ್ನಣೆ ಸಿಕ್ಕಿದ್ದು ಅತ್ಯಂತ ಹರ್ಷತಂದಿದೆ ಎಂದರು.

<><><>

**ರಾಜ್ಯದಲ್ಲೇ ಪ್ರಥಮ ಬಾರಿಗೆ ಪಶ್ಚಿಮ ಘಟ್ಟದ ಜೀವವೈವಿಧ್ಯ, ಅರಣ್ಯ, ಪರಿಸರ ಕುರಿತು ಈವರೆಗೆ** ನಡೆದಿರುವ ಸಂಶೋಧನೆಗಳು ಹಾಗೂ ಅಧ್ಯಯನಗಳ ಬಗ್ಗೆ ರಾಜ್ಯ ಮಟ್ಟದ ಕಾರ್ಯಾಗಾರ ಕಾಳಿ– ಬೇಡ್ತಿ ಕಣ್ಣಿವೆಗಳ ಮಧ್ಯೆ ಯಲ್ಲಾಪುರದಲ್ಲಿ ಇಂದು

ಆಯೋಜಿತವಾಗಿದೆ ಎಂದು ವೃಕ್ಷಲಕ್ಷ ಆಂದೋಲನ ಕರ್ನಾಟಕ ಅಧ್ಯಕ್ಷ ಅನಂತ ಹೆಗಡೆ ಅಶೀಸರ ತಿಳಿಸಿದ್ದಾರೆ. ರಾಜ್ಯ ಜೀವ ವೈವಿಧ್ಯ ಮಂಡಳಿ, ತಾಲೂಕಾ ಪಂಚಾಯತ ಜೀವ ವೈವಿಧ್ಯ ಸಮಿತಿ ಯಲ್ಲಾಪುರ ಇವರು ವೃಕ್ಷ ಲಕ್ಷ ಅಂದೋಲನದ ಸಹಯೋಗದಲ್ಲಿ ಕಾರ‍್ಯಾಗಾರ ಏರ್ಪಡಿಸಲಾಗಿದೆ. ಅಂತಾರಾಷ್ಟ್ರೀಯ ಜೀವವೈವಿಧ್ಯ ದಿನಾಚರಣೆ ಅಂಗವಾಗಿ ನಡೆಯುವ ಕಾರ್ಯಾಗಾರ ಈವರೆಗಿನ ಹಲವು ಅಧ್ಯಯನ ವರದಿಗಳು, ಶಿಫಾರಸು ಇವುಗಳನ್ನು ಅಧರಿಸಿ ಸರ್ಕಾರ ಕೈಗೊಂಡ ಕ್ರಮಗಳ ಬಗ್ಗೆ ಚರ್ಚಿಸಲಿದೆ.

<><><>

**ಅತಿ ಹೆಚ್ಚು ರಾಸಾಯನಿಕ ಬಳಸಿ ಕೃಷಿ ಮಾಡುವುದ್ದರಿಂದ ಮಣ್ಣಿನ ಫಲವತ್ತತೆ ಬೇಗ** ಕಡಿಮೆಯಾಗುತ್ತದೆ ಎಂದು ರಾಜ್ಯೋತ್ಸವ ಪ್ರಶಸ್ತಿ ವಿಜೇತ ಸಾವಯಾವ  ಕೃಷಿಕರಾದ ಚಂದ್ರಶೇಖರ್ ನಾರಾಣಾಪುರ ಹೇಳಿದ್ದಾರೆ. ಚಿಕ್ಕಮಗಳೂರು ತಾಲ್ಲೂಕಿನ ಮೂಗ್ತಿಹಳ್ಳಿ ಗ್ರಾಮದಲ್ಲಿ ನಡೆದ ಆರೋಗ್ಯಕರ ಭವಿಷ್ಯಕ್ಕಾಗಿ– ಸಾವಯವ ಕೃಷಿ ಸಂವಾದ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದ ಅವರು. ನಮ್ಮ ದೇಶದಲ್ಲಿ ಯಥೇಚ್ಛವಾಗಿ ರಾಸಾಯನಿಕ ಬಳಸಿ ಬೆಳೆಗಳನ್ನು ಬೆಳೆಯುತ್ತಿರುವುದರಿಂದ ಸಣ್ಣ ವಯಸ್ಸಿನಿಂದಲೇ ಮಧುಮೇಹ ರಕ್ತದೊತ್ತಡ ಕಾಯಿಲೆ ಹಾಗೂ ಪೌಷ್ಠಿಕಾಂಶ ಕೊರತೆಯಿಂದ ಅಂಗಾಂಗಗಳು ಹಾನಿಗೆ ತುತ್ತಾಗುತ್ತಿರುವ ಪ್ರಕರಣಗಳು ಕೇಳಿಬರುತ್ತಿವೆ. ಇದೇ ರೀತಿ ಮಣ್ಣಿಗೆ ವಿಷ ಉಣಿಸಿದರೆ ಭಾರತ 2042ರ ಹೊತ್ತಿಗೆ ಮಣ್ಣಿನ ಸತ್ವ ಕಳೆದುಕೊಳ್ಳಲಿದೆ ಎಂದು ವಿಶ್ವ ಸಂಸ್ಥೆ ಎಚ್ಚರಿಕೆ ನೀಡಿದೆ ಈ ಬಗ್ಗೆ ರೈತರು ಜಾಗೃತರಾಗಬೇಕೆಂದು ಕರೆ ನೀಡಿದರು.

<><><>

**ಕೋಲಾರ ಜಿಲ್ಲೆಯಲ್ಲಿ ಮಾದಕ ವಸ್ತುಗಳ ಹಾವಳಿಯನ್ನು** ಬೇರುಸಹಿತ ಕಿತ್ತುಹಾಕಲು ಜಿಲ್ಲಾಡಳಿತ ಕ್ರಮವಹಿಸಿದ್ದು, ನಗರ ಪ್ರದೇಶಗಳಲ್ಲಿನ ಖಾಲಿ ನಿವೇಶನಗಳಲ್ಲಿ ಗಾಂಜಾ ಗಿಡಗಳು ಕಂಡುಬಂದರೆ ನೇರವಾಗಿ ಆಯಾ ನಿವೇಶನಗಳ ಮಾಲೀಕರ ವಿರುದ್ಧವೇ ಕ್ರಿಮಿನಲ್ ಪ್ರಕರಣ ದಾಖಲಿಸಲಾಗುವುದು ಎಂದು ಜಿಲ್ಲಾಧಿಕಾರಿ ಡಾ. ಎಂ.ಆರ್. ರವಿ  ಕಟ್ಟುನಿಟ್ಟಿನ ಎಚ್ಚರಿಕೆ ನೀಡಿದ್ದಾರೆ. ರಾಷ್ಟ್ರೀಯ ಮಾದಕವಸ್ತು ಸಮನ್ವಯ ಪೋರ್ಟಲ್ ಸಮಿತಿ ಸಭೆಯಲ್ಲಿ ಡ್ರಗ್ಸ್ ನಿಯಂತ್ರಣ ಕುರಿತು ವಿವಿಧ ಇಲಾಖೆಗಳ ಪ್ರಗತಿ ಪರಿಶೀಲನೆ ನಡೆಸಿ ಅವರು ಮಾತನಾಡಿದರು. ಇತ್ತೀಚೆಗೆ ನಗರದ ಖಾಲಿ ನಿವೇಶನವೊಂದರಲ್ಲಿ ಗಾಂಜಾ ಗಿಡಗಳು ಪತ್ತೆಯಾಗಿರುವ ಪ್ರಕರಣವನ್ನು ಗಂಭೀರವಾಗಿ ಪರಿಗಣಿಸಿದ ಜಿಲ್ಲಾಧಿಕಾರಿಗಳು, ನಗರ ಮತ್ತು ಪಟ್ಟಣ ಪ್ರದೇಶಗಳಲ್ಲಿ ಖಾಲಿ ಬಿಟ್ಟಿರುವ ನಿವೇಶನಗಳನ್ನು ಸ್ವಚ್ಛವಾಗಿಟ್ಟುಕೊಳ್ಳುವುದು ಮಾಲೀಕರ ಜವಾಬ್ದಾರಿಯಾಗಿದೆ. ಇಂತಹ ಜಾಗಗಳು ಅಕ್ರಮ ಚಟುವಟಿಕೆಗಳಿಗೆ ತಾಣವಾಗದಂತೆ ಕ್ರಮವಹಿಸಬೇಕು ಎಂದರು.

<><><>

**ಅಲ್ಪಸಂಖ್ಯಾತರ ಅಭಿವದ್ಧಿಗಾಗಿ ಪ್ರಧಾನಮಂತ್ರಿ ಯವರ 15 ಅಂಶಗಳ** ಕಾರ್ಯಕ್ರಮಗಳನ್ನು ಕಾಲಮಿತಿಯೊಳಗೆ ತಲುಪಿಸಬೇಕು ಹಾಗೂ ಕಾರ್ಯಕ್ರಮದ ಪರಿಣಾಮಕಾರಿ ಅನುಷ್ಠಾನಕ್ಕೆ ಎಲ್ಲ ಇಲಾಖೆಯ ಅಧಿಕಾರಿಗಳು ಆದ್ಯತೆ ನೀಡಬೇಕು. ಯೋಜನೆಗಳ ಅನುಷ್ಠಾನದಲ್ಲಿ ಯಾವುದೇ ನಿರ್ಲಕ್ಷ್ಯ ಬೇಡ ಎಂದು ಕರ್ನಾಟಕ ರಾಜ್ಯ ಅಲ್ಪಸಂಖ್ಯಾತರ ಆಯೋಗದ ಅಧ್ಯಕ್ಷ ಯು. ನಿಸಾರ್ ಅಹಮದ್  ತಿಳಿಸಿದ್ದಾರೆ. ಮಂಡ್ಯದಲ್ಲಿ ಜಿಲ್ಲಾ ಮಟ್ಟದ ಪ್ರಧಾನ ಮಂತ್ರಿಗಳ ಹೊಸ 15 ಅಂಶಗಳ ಕಾರ್ಯಕ್ರಮಕ್ಕೆ ಸಂಬಂಧಿಸಿದ ಜಿಲ್ಲಾ ಮಟ್ಟದ ಅಧಿಕಾರಿಗಳೊಂದಿಗೆ ಪ್ರಗತಿ ಪರಿಶೀಲನಾ ಸಭೆಯಲ್ಲಿ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಪ್ರಧಾನ ಮಂತ್ರಿಗಳ 15 ಅಂಶಗಳ ಕಾರ್ಯಕ್ರಮವು ಅಲ್ಪಸಂಖ್ಯಾತ ಸಮುದಾಯಗಳಾದ ಮುಸ್ಲಿಂ, ಜೈನ್, ಕ್ರಿಶ್ಚಿಯನ್, ಸಿಖ್, ಪಾರ್ಸಿ ಹಾಗೂ ಬೌದ್ಧ ಸಮುದಾಯಗಳ ಸಮಗ್ರ ಅಭಿವೃದ್ಧಿಗಾಗಿ ರೂಪಿಸಲಾದ ಪ್ರಮುಖ ಯೋಜನೆಯಾಗಿದೆ ಎಂದು ಅವರು ಹೇಳಿದರು.

<><><>

ಕೊನೆಯಲ್ಲಿ ಮತ್ತೊಮ್ಮೆ ಮುಖ್ಯಾಂಶಗಳು :

- ಶಿಕ್ಷಣವು ಸಂಸ್ಕೃತಿ ಸೇವೆ, ತಾಂತ್ರಿಕ ಅಭಿವೃದ್ಧಿ ಮತ್ತು ರಾಷ್ಟ್ರ ನಿರ್ಮಾಣದ ಹೊಸ ಪ್ರಜ್ಞೆಯ ಆರಂಭ ರಾಜ್ಯಪಾಲ ಥಾವರಚಂದ್ ಗೆಹ್ಲೋಟ್.

- ಕೃಷಿ ನಾವೀನ್ಯತೆ ಹಾಗೂ ಕೃಷಿ ಉದ್ಯಮಶೀಲತೆ ಕ್ಷೇತ್ರಗಳಲ್ಲಿ ದೇಶದಲ್ಲೇ ಕರ್ನಾಟಕ ಪ್ರಮುಖ – ಸಚಿವ ಎನ್. ಚಲುವರಾಯಸ್ವಾಮಿ.

- ರಾಜ್ಯದಲ್ಲಿ ತೆರವಾಗಲಿರುವ ವಿಧಾನಪರಿ ’ತ್ ಸ್ಥಾನಗಳಿಗೆ ಜೂನ್ 18 ರಂದು ಚುನಾವಣೆ.

- ಏರುತ್ತಿರುವ ರಾಜ್ಯ ಸರ್ಕಾರದ ಸಾಲದ ಪ್ರಮಾಣ – ವಿಪಕ್ಷ ನಾಯಕ ಆರ್. ಅಶೋಕ ಆರೋಪ

- ಧಾರವಾಡ ಪ್ರತ್ಯೇಕ ನಗರ ಪಾಲಿಕೆಗೆ ರಾಜ್ಯಪಾಲರ ಅಂಕಿತ : ಧಾರವಾಡ ಕರ್ನಾಟಕ ವಿದ್ಯಾವರ್ಧಕ ಸಂಘದ ಸಂತಸ.

<><><>

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು

ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ ಈ ಬೆಳಿಗ್ಗೆ 7 ಗಂಟೆ 35 ನಿಮಿಷಕ್ಕೆ

********